# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2646 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 25-03-2022 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಇಲಾಖೆಯ ವತಿಯಿಂದ ಸಾವಯವ ಕೃಷಿಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೃಷಿ ಇಲಾಖೆಯ ವತಿಯಿಂದ ಸಾವಯವ ಕೃಷಿಯನ್ನು ಉತ್ತೇಜಿಸಲು ಸರ್ಕಾರದಿಂದ ಈ ಕೆಳಗಿನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>**1. ಸಾವಯವ ಕೃಷಿ ಅಳವಡಿಕೆ ಮತ್ತು ಪ್ರಮಾಣೀಕರಣ ಕಾರ್ಯಕ್ರಮ:** ಈ ಕಾರ್ಯಕ್ರಮವು ಪ್ರಸ್ತಾವನೆ ಆಧಾರಿತವಾಗಿದ್ದು, ರಾಜ್ಯದ ರೈತರ ಗುಂಪು ಮತ್ತು ವ್ಯಕ್ತಿಗತ ಪ್ರಸ್ತಾವನೆಗಳಿಗೆ KSOCA ಸಂಸ್ಥೆಯ ಮುಖಾಂತರ ಸಾವಯವ ಪ್ರಮಾಣೀಕರಣ ಶುಲ್ಕ ಭರಿಸಲಾಗುತ್ತಿದೆ.<br>**2. ನೈಸರ್ಗಿಕ ಕೃಷಿ ಕಾರ್ಯಕ್ರಮ:** ಶೂನ್ಯ ಬಂಡವಾಳ ನೈಸರ್ಗಿಕ ಕೃಷಿ ಪದ್ಧತಿಯ ವೈಜ್ಞಾನಿಕ ಮೌಲ್ಯೀಕರಣವನ್ನು ರಾಜ್ಯದ ಕೃಷಿ ವಿಶ್ವ ವಿದ್ಯಾನಿಲಯಗಳ ಮುಖಾಂತರ ರಾಜ್ಯದ ಎಲ್ಲಾ 10 ಹವಾಮಾನ ವಲಯಗಳ ಸಂಶೋಧನಾ ಕೇಂದ್ರಗಳಲ್ಲಿ ಹಾಗೂ ಆಯ್ದ ರೈತರ ತಾಕುಗಳಲ್ಲಿ Operational Research Project (ORP) ಮಾದರಿಯಲ್ಲಿ ಪ್ರಾಯೋಗಿಕ ಪ್ರಯೋಗಗಳನ್ನು ಕೈಗೊಳ್ಳಲಾಗುತ್ತಿದ್ದು, ಪ್ರಸ್ತುತ ಪ್ರಯೋಗಗಳು ಅಂತಿಮ ಹಂತದಲ್ಲಿರುತ್ತವೆ.<br>**3.ರೈತ ಸಿರಿ ಯೋಜನೆ:** ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಸಾವಯವ ಮತ್ತು ಸಾಂಪ್ರದಾಯಿಕವಾಗಿ ಬೆಳೆಯುವ ಸಿರಿಧಾನ್ಯಗಳಾದ ನವಣೆ, ಹಾರಕ ಸಾಮೆ, ಕೊರಲೆ, ಬರಗು ಮತ್ತು ಊದಲು ಬೆಳೆಗಳನ್ನು ಬೆಳೆಯುವ ರೈತರಿಗೆ ಪ್ರತಿ ಹೆಕ್ಟೇರ್ ಗೆ ರೂ.10000/-ಗಳಂತೆ (ಗರಿಷ್ಠ ಎರಡು ಹೆಕ್ಟೇರ್)ಗೆ DBT ಮೂಲಕ ಪ್ರೋತ್ಸಾಹಧನ ವಿತರಿಸಲಾಗುತ್ತಿದೆ.<br>**4. ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ:** ಸಿರಿಧಾನ್ಯ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಘಟಕಗಳಿಗೆ ಶೇ.50ರಷ್ಟು ಅಥವಾ ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತಿದೆ. |

| | | |
|---|---|---|
| | | 5. 2021-22 ನೇ ಸಾಲಿನ ಆಯವ್ಯಯ ಘೋಷಣಾ ಹೊಸ ಸಾವಯವ ಕೃಷಿ ಉತ್ತೇಜನ ಕಾರ್ಯಕ್ರಮವಾದ "ಸಾವಯವ ಸಿರಿ" ಯೋಜನೆಯ ಅನುಷ್ಠಾನವನ್ನು ರಾಜ್ಯಾದ್ಯಂತ ಪ್ರಾರಂಭಿಸಲಾಗಿದೆ. |
| ಆ) | ಸಾವಯವ ಕೃಷಿಯಲ್ಲಿ ಭೂಮಿಯನ್ನು ಅಭಿವೃದ್ಧಿ ಪಡಿಸಲು ಎರೆಹುಳು ಗೊಬ್ಬರ ಉತ್ಪಾದನೆಗೆ ಸರ್ಕಾರ ನೀಡುತ್ತಿರುವ ಅನುದಾನವೆಷ್ಟು; | ಸಾವಯವ ಕೃಷಿಯಲ್ಲಿ ಭೂಮಿಯನ್ನು ಅಭಿವೃದ್ಧಿಪಡಿಸಲು ಎರೆಹುಳು ಗೊಬ್ಬರ ಉತ್ಪಾದನೆಗೆ ಸರ್ಕಾರದಿಂದ ಯಾವುದೇ ಅನುದಾನ ನೀಡುತ್ತಿರುವುದಿಲ್ಲ. |
| ಇ) | ರಾಜ್ಯದಲ್ಲಿ ಕೃಷಿ ಸಿಂಚಾಯಿ ಯೋಜನೆಯು ಅನುಷ್ಠಾನಗೊಳಿಸಲಾಗಿರುವುದೇ; ಈ ಯೋಜನೆಯಡಿ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಅನುಷ್ಠಾನದಲ್ಲಿ ಅರ್ಹ ಫಲಾನುಭವಿ ರೈತಾಪಿ ವರ್ಗದವರೆಲ್ಲರಿಗೂ ಯೋಜನಾ ಸೌಲಭ್ಯ ದೊರಕಿಸಿ ಕೊಡುವ ನಿಟ್ಟಿನಲ್ಲಿ ಈ ಕೆಳಗಿನಂತೆ ಕ್ರಮವಹಿಸಲಾಗಿದೆ:<br>1. ತುಂತುರು ನೀರಾವರಿ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನ ಒದಗಿಸಲಾಗುತ್ತಿದೆ.<br>2. ಹನಿ ನೀರಾವರಿ ಘಟಕಗಳಿಗೆ ಸಣ್ಣ/ಅತಿ ಸಣ್ಣ/ಪ.ಜಾ/ಪ.ಪಂ. ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನ ಒದಗಿಸಲಾಗುತ್ತಿದೆ.<br>3. ರಾಜ್ಯದಲ್ಲಿ ವರ್ಷಂಪ್ರತಿ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗಾಗಿ ಬೇಡಿಕೆ ಹೆಚ್ಚಾಗುತ್ತಿದ್ದು, ಬೇಡಿಕೆಗೆ ಅನುಗುಣವಾಗಿ ಕೇಂದ್ರ ಸರ್ಕಾರದಿಂದ ಹೆಚ್ಚಿನ ಅನುದಾನ ಪಡೆಯಲು ಪ್ರಯತ್ನಿಸಲಾಗುತ್ತಿದೆ<br><br>ರಾಜ್ಯದಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ ಈ ಕೆಳಕಂಡಂತಿವೆ.<br>**ಅ) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ–ಜಲಾನಯನ ಅಭಿವೃದ್ಧಿ ಘಟಕ :**<br>2021-22ನೇ ಸಾಲಿನಲ್ಲಿ ಈ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆಯಾಗಿರುವುದಿಲ್ಲ. ಲಭ್ಯವಿರುವ ಪ್ರಾರಂಭಿಕ ಶಿಲ್ಕು ರೂ. 1405.48 ಲಕ್ಷಗಳಲ್ಲಿ ಫೆಬ್ರವರಿ 2022ರ ಅಂತ್ಯಕ್ಕೆ ರೂ.854.09 ಲಕ್ಷಗಳನ್ನು ವೆಚ್ಚ ಮಾಡಿ 187 ನೀರು ಸಂಗ್ರಹಣಾ ರಚನೆಗಳನ್ನು |

| | | |
|---|---|---|
| | | ರಚಿಸಲಾಗಿರುತ್ತದೆ ಹಾಗೂ 6875 ಹೆಕ್ಟೇರ್ ಪ್ರದೇಶವನ್ನು ಉಪಚರಿಸಲಾಗಿದೆ.<br>**ಆ) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು:**<br>2021-22ನೇ ಸಾಲಿನಲ್ಲಿ ಈ ಕಾರ್ಯಕ್ರಮಕ್ಕೆ ಆಯವ್ಯಯದಲ್ಲಿ ರೂ.6600.00 ಲಕ್ಷ ಅನುದಾನ ನಿಗದಿಪಡಿಸಲಾಗಿದ್ದು, ಇದರಲ್ಲಿ ಫೆಬ್ರವರಿ 2022ರ ಅಂತ್ಯಕ್ಕೆ ಪ್ರಾರಂಭಿಕ ಶಿಲ್ಕು ಸೇರಿದಂತೆ ಒಟ್ಟು ರೂ.6391.28 ಲಕ್ಷ ಲಭ್ಯವಿರುತ್ತದೆ. ಲಭ್ಯವಿರುವ ಅನುದಾನದಲ್ಲಿ ರೂ.5980.96 ಲಕ್ಷಗಳನ್ನು ವೆಚ್ಚ ಮಾಡಿ 1213 ವಿವಿಧ ನೀರು ಸಂಗ್ರಹಣಾ ರಚನೆಗಳನ್ನು ರಚಿಸಲಾಗಿರುತ್ತದೆ.<br>**ಇ) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ–ಜಲಾನಯನ ಅಭಿವೃದ್ಧಿ ಘಟಕ 2.0:**<br>ಈ ಯೋಜನೆಯನ್ನು ಕೇಂದ್ರ ಸರ್ಕಾರವು ದಿನಾಂಕ: 20.01.2022 ರಂದು ಮಂಜೂರು ಮಾಡಿದ್ದು, ರಾಜ್ಯದಲ್ಲಿ 57 ತಾಲ್ಲೂಕುಗಳ 57 ಜಲಾನಯನ ಪ್ರದೇಶಗಳ 2.75 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಶೇ.60:40 ಅನುಪಾತದಲ್ಲಿ, ರೂ.642.26 ಕೋಟಿ ಅನುದಾನದಲ್ಲಿ 5 ವರ್ಷಗಳ ಅವಧಿಗೆ ಅನುಷ್ಠಾನಗೊಳಿಸಲಾಗುತ್ತಿದೆ. 2021-22ನೇ ಸಾಲಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಸೇರಿದಂತೆ 160.55 ಕೋಟಿ (96.33+64.22) ಅನುದಾನ ಮಂಜೂರಾಗಿದ್ದು, ಇದರಲ್ಲಿ ರೂ.35.69 ಕೋಟಿ ಮಾರ್ಚ್ 2022ರಲ್ಲಿ ಸರ್ಕಾರದಿಂದ ಬಿಡುಗಡೆಯಾಗಿದ್ದು, ಕಾರ್ಯಕ್ರಮದ ಅನುಷ್ಠಾನ ಪ್ರಗತಿಯಲ್ಲಿರುತ್ತದೆ. |
| ಈ) | ಕೃಷಿ ಯಾಂತ್ರೀಕರಣ ಯೋಜನೆಯಡಿಯಲ್ಲಿ ರೈತರಿಗೆ ಎಷ್ಟು ಹೆಚ್.ಪಿ.ವರೆಗೆ ಟ್ರಾಕ್ಟರ್ ಖರೀದಿಸಲು ಅನುದಾನ ನೀಡಲಾಗುತ್ತಿದೆ? | ಕೃಷಿ ಯಾಂತ್ರೀಕರಣ ಯೋಜನೆಯಡಿಯಲ್ಲಿ ರೈತರಿಗೆ 45 ಹೆಚ್ ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. |

ಸಂಖ್ಯೆ: AGRI-ACT/74/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು